ಪ್ರಾಥಮಿಕ ಶಾಲಾ ಶಿಕ್ಷಕಿಯರ ನೇಮಕ.

803 (834) ಶ್ರೀ ರಾಜಶೇಖರ ಶೀಲವಂತ ವೀರಣ್ಣ (ಗುಳೇದಗುಡ್ಡ) :— ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿನ ಪೂರ್ವಪ್ರಾಥಮಿಕ ಶಾಲೆ (ಬಾಲವಾಡಿ) ಗಳನ್ನು ಕಿರಿಯ ಪ್ರಾಥಮಿಕ ಶಾಲೆಗಳಲ್ಲಿ ವಿಲೀನಗೊಳಿಸುವ ಪೂರ್ವ ಪ್ರಾಥಮಿಕ ಶಾಲಾ ಶಿಕ್ಷಕರನ್ನು ಕಿರಿಯ ಪ್ರಾಥಮಿಕ ಶಾಲೆಗಳಿಗೆ ನೇಮಕ ಮಾಡುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆಯೇ?

ಆ) ಹಾಗಿದ್ದರೆ ರಾಜ್ಯದಲ್ಲಿ ಪೂರ್ವ ಪ್ರಾಥಮಿಕ ಶಿಕ್ಷಣ ತರಬೇತಿ (ಎಸ್.ಟಿ.ಸಿ) ಹೊಂದಿ ಬಾಲವಾಡಿ ಶಾಲೆಗಳಿಗೆ ಶಿಕ್ಷಕಿಯಾಗಬಯಸಿದ ಲಕ್ಷಾಂತರ ಮಹಿಳೆಯರನ್ನು ಸರ್ಕಾರ ಬೇರೆ ಹುದ್ದೆಗಳಿಗೆ ನೇಮಕ ಮಾಡಿಕೊಳ್ಳಲು ಉದ್ದೇಶಿಸಿದೆಯೇ?

ಇ) ಹಾಗಿಲ್ಲದಿದ್ದಲ್ಲಿ ಹಣ ಹಾಗೂ ಸಮಯವನ್ನು ವ್ಯಯಮಾಡಿ ತರಬೇತಿ ಪಡೆದು ಶಿಕ್ಷಕಿಯಾಗಬಯಸಿದ ಮಹಿಳೆಯರಿಗೆ ಸರ್ಕಾರ ಯಾವ ಪರಿಹಾರ ಕ್ರಮ ಸೂಚಿಸುತ್ತದೆ?

ಶ್ರೀ ಹೆಚ್.ಜಿ. ಗೋವಿಂದಗೌಡ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು) :—

ಅ) ಸರ್ಕಾರಿ ಪೂರ್ವ ಪ್ರಾಥಮಿಕ ಶಾಲಾ ಶಿಕ್ಷಕರನ್ನು ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳಿಗೆ ನಿಯುಕ್ತಿಗೊಳಿಸುವ ಪ್ರಸ್ತಾವನೆ ಪರಿಶೀಲನೆಯಲ್ಲಿದೆ.

ಆ) ಇಲ್ಲ

ಇ) ಇಂತಹ ತರಬೇತಿ ಹೊಂದಿದ ಖಾಸಗಿ ಪೂರ್ವ ಪ್ರಾಥಮಿಕ ಶಾಲೆಗಳಲ್ಲಿ ಹಾಗೂ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಗಳಲ್ಲಿ ಬರುವ ಅಂಗನವಾಡಿಗಳಲ್ಲಿ ನೇಮಕಾತಿ ಹೊಂದಲು ಅವಕಾಶ ಇದೆ.